# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 523 |
| 2. | ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3. | ಉತ್ತರಿಸುವ ದಿನಾಂಕ | : | 14.08.2025 |
| 4. | ಉತ್ತರಿಸುವ ಸಚಿವರು | : | ಗೃಹ ಸಚಿವರು. |

| ಪ್ರಶ್ನೆ | ಉತ್ತರ |
|---|---|
| (ಅ)ರಾಜ್ಯದ ಶಾಲಾ ಕಾಲೇಜುಗಳ ಸುತ್ತಮುತ್ತ ಮಾದಕ ವಸ್ತುಗಳ ಮಾರಾಟ ನಿಯಂತ್ರಣ ಮತ್ತು ಪೆಡ್ಲರ್‌ಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು; | ರಾಜ್ಯದ ಶಾಲಾ ಕಾಲೇಜುಗಳ ಸುತ್ತಮುತ್ತ ಮಾದಕ ವಸ್ತುಗಳ ಮಾರಾಟವನ್ನು ನಿಯಂತ್ರಿಸಲು, ಮಾದಕ ವಸ್ತುಗಳ ಸೇವನೆ ಮತ್ತು ಮಾರಾಟ ಮಾಡುವವರ ವಿರುದ್ಧ ಎನ್.ಡಿ.ಪಿ.ಎಸ್. ಕಾಯ್ದೆ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿಕೊಂಡು ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.<br><br>**ರಾಜ್ಯದಲ್ಲಿ ಮಾದಕ ವಸ್ತುಗಳ ಸೇವನೆ, ಮಾರಾಟವನ್ನು ತಡೆಗಟ್ಟಲು ಸರ್ಕಾರವು ತೆಗೆದುಕೊಂಡ ಕ್ರಮಗಳು ಈ ಕೆಳಕಂಡಂತಿದೆ:**<br><br>➢ ರಾಜ್ಯದಲ್ಲಿ ಮಾದಕ ವಸ್ತುಗಳ ನಿಯಂತ್ರಣ ಕುರಿತಂತೆ ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ/141/ಪಿಓಪಿ/2025, ದಿನಾಂಕ: 01/08/2025 ರಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಪೊಲೀಸ್ ಠಾಣೆಗಳಲ್ಲಿ ನಾರ್ಕೋಟಿಕ್ಸ್ ಸಂಬಂಧ ದಾಖಲಾಗುವ ಪ್ರಕರಣಗಳ ಮೇಲ್ವಿಚಾರಣೆಗಾಗಿ ಮಾದಕ ವಸ್ತುಗಳ ವಿರೋಧಿ ಕಾರ್ಯಪಡೆ (**Anti Narcotic Task Force**) ಘಟಕವನ್ನು ಹೆಚ್ಚುವರಿ ಪೊಲೀಸ್ ಅಧೀಕ್ಷಕರು, ಪೊಲೀಸ್ ಉಪಾಧೀಕ್ಷಕರು ಮತ್ತು ಲಿಪಿಕ ಅಧಿಕಾರಿ/ ಸಿಬ್ಬಂದಿಗಳನ್ನೊಳಗೊಂಡ 10 ಹುದ್ದೆಗಳೊಂದಿಗೆ ಸೃಜಿಸಲು ಮತ್ತು ಸದರಿ ಘಟಕಕ್ಕೆ ಅವಶ್ಯವಿರುವ ಒಟ್ಟು 56 ಹುದ್ದೆಗಳನ್ನು ನಕ್ಸಲ್ ನಿಗ್ರಹ ಪಡೆ (**Anti Naxal Force**) ಘಟಕದಿಂದ ವರ್ಗಾಯಿಸಲು ಹಾಗೂ ಮಾದಕ ವಸ್ತುಗಳ ವಿರೋಧಿ ಕಾರ್ಯಪಡೆ (Anti Narcotic Task Force) ಘಟಕವು ಒಟ್ಟಾರೆಯಾಗಿ ಡಿಜಿ ಮತ್ತು ಐಜಿಪಿರವರ ಅಧೀನದಲ್ಲಿ ಕಾರ್ಯನಿರ್ವಹಿಸುವಂತೆ ಮತ್ತು ಡಿ.ಜಿ, ಸೈಬರ್ ಕಮಾಂಡ್‌ರವರಿಗೆ ಕಾರ್ಯವರದಿ ಮಾಡಿಕೊಳ್ಳುವಂತೆ ಆದೇಶಿಸಲಾಗಿರುತ್ತದೆ.<br><br>➢ ಮಾದಕ ಬೆಳೆಗಳ ಗುರುತಿಸುವಿಕೆ ಮತ್ತು ನಾಶ, ಅಕ್ರಮ ಮಾದಕ ವ್ಯಸನವನ್ನು ಪತ್ತೆ ಹಚ್ಚಲು ಮತ್ತು ನಿರ್ಮೂಲನೆ ಮಾಡಲು ರಾಜ್ಯಾದ್ಯಂತ ಪೊಲೀಸ್ ಸಿಬ್ಬಂದಿಗೆ NCB (ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ) ಆನ್‌ಲೈನ್ ಕಾರ್ಯಗಾರಗಳ ಮೂಲಕ ತರಬೇತಿ ನೀಡಲಾಗುತ್ತಿದೆ. ಈ ಉದ್ದೇಶಕ್ಕಾಗಿ NCB ಮೊಬೈಲ್ ಅಪ್ಲಿಕೇಶನ್/ವೆಬ್ ಪೋರ್ಟಲ್ MAPDRUGS ಅನ್ನು ಸಹ ಪರಿಚಯಿಸಲಾಗಿದೆ.<br><br>➢ ಮಾದಕವಸ್ತು ಸಂಬಂಧಿತ ಪ್ರಕರಣಗಳಲ್ಲಿ ರಾಜ್ಯ ಪೊಲೀಸರ ತನಿಖಾ ಸಾಮರ್ಥ್ಯಗಳನ್ನು ಹೆಚ್ಚಿಸಲು NCB ಮತ್ತು ಇತರ ಏಜೆನ್ಸಿಗಳ ಸಹಯೋಗದೊಂದಿಗೆ ಆರು ಕಾರ್ಯಾಗಾರಗಳನ್ನು ಆಯೋಜಿಸಲಾಗಿದೆ. ಉಪ ಅಧೀಕ್ಷಕರವರಿಗೆ (ಡಿವೈಎಸ್ಪಿ), ಪೊಲೀಸ್ ನಿರೀಕ್ಷಕರು ಮತ್ತು ಅಬಕಾರಿ ಅಧಿಕಾರಿಗಳಿಗೆ ವಿಶೇಷ ತರಬೇತಿಯನ್ನು ನೀಡಲಾಗಿರುತ್ತದೆ. |

- ತರಬೇತಿ ಕಾರ್ಯಕ್ರಮಗಳು:- ಸಿಐಡಿ ಅಧಿಕಾರಿಗಳನ್ನು ಭೋಪಾಲ್ ನಲ್ಲಿರುವ ಸೆಂಟ್ರಲ್ ಅಕಾಡೆಮಿ ಫಾರ್ ಪೊಲೀಸ್ ಟ್ರೈನಿಂಗ್ (ಸಿಎಪಿಟಿ) ತರಬೇತುದಾರರಿಗಾಗಿ ತರಬೇತಿ (TOT) ಹಾಗೂ ಮಾದಕ ದ್ರವ್ಯ ತನಿಖೆಯ ಮೇಲೆ ಕೇಂದ್ರೀಕರಿಸಿದ ಕಾರ್ಯಕ್ರಮಗಳಿಗೆ ಕಳುಹಿಸಲಾಗಿದೆ. NDPS ಕಾಯ್ದೆ (Narcotic Drugs and Psychotropic Substances Act-1985) ಕುರಿತು ಇತರ ಸಿಬ್ಬಂದಿಗೆ ಪೊಲೀಸ್ ತರಬೇತಿ ಶಾಲೆಗಳಲ್ಲಿ ಇದೇ ರೀತಿಯ ತರಬೇತಿಯನ್ನು ನೀಡಲಾಗುತ್ತಿದೆ.
- ಮಾದಕ ದ್ರವ್ಯ ಸೇವನೆ, ಮಾರಾಟ, ಸಂಗ್ರಹಣೆ ಮತ್ತು ಸರಬರಾಜು ಮಾಡುವವರ ವಿರುದ್ಧ ಕ್ರಮ ಕೈಗೊಳ್ಳುವ ಸಲುವಾಗಿ ಸಿಐಡಿ ಘಟಕದಲ್ಲಿ ವಿಶೇಷ ತರಬೇತಿ ನೀಡುವ ಸೌಲಭ್ಯವನ್ನು ಕಲ್ಪಿಸಲಾಗಿದೆ. ಈಗಾಗಲೇ ರಾಜ್ಯದಲ್ಲಿ 167 ಅಧಿಕಾರಿ/ಸಿಬ್ಬಂದಿಗಳಿಗೆ ತರಬೇತಿಯನ್ನು ನೀಡಲಾಗಿದೆ.
- NDPS ಪ್ರಕರಣಗಳಲ್ಲಿನ ಆರೋಪಿಗಳ ಮಾಹಿತಿಯನ್ನು ಪೊಲೀಸ್ ಐಟಿ ತಂತ್ರಾಂಶ- National Integrated Database on Arrested Narco Offenders - NIDAAN ಪೋರ್ಟಲ್‌ನಲ್ಲಿ ದಾಖಲಿಸಿ ನಿರ್ವಹಿಸಲಾಗುತ್ತಿದೆ. ಆರೋಪಿಗಳ ದತ್ತಾಂಶ ವಿಶ್ಲೇಷಣೆ ಮಾಡಿ ಆರೋಪಿಗಳ ಚಲನ-ವಲನಗಳ ಮೇಲೆ ನಿಗಾವಹಿಸಲಾಗಿದೆ.
- ಬೆಂಗಳೂರು ಪೊಲೀಸರು ಅಕ್ರಮ ಮಾದಕ ದ್ರವ್ಯ ಚಟುವಟಿಕೆಗಳಲ್ಲಿ ತೊಡಗಿರುವ ವಿದೇಶಿಗರು ವಾಸಿಸುವ ಪ್ರದೇಶಗಳ ಮೇಲೆ ಸೂಕ್ತ ನಿಗಾವಹಿಸಿ ಅಕ್ರಮ ಚಟುವಟಿಕೆ ಮೇಲೆ ನಿಯಂತ್ರಣ ಸಾಧಿಸಲಾಗಿದೆ.
- ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ NCORD (Narcotics Co-ordination) ಸಮಿತಿ ರಚನೆಗೊಂಡಿರುತ್ತದೆ. NDPS ಕಾಯ್ದೆ ಜಾರಿಗೊಳಿಸುವ ಸಂಬಂಧ ಇತರ ಇಲಾಖೆಯ ಸಮನ್ವಯದೊಂದಿಗೆ ಕ್ರಮ ಕೈಗೊಳ್ಳಲಾಗುತ್ತಿದೆ.
- ಎನ್.ಡಿ.ಪಿ.ಎಸ್ ಪ್ರಕರಣಗಳಲ್ಲಿ ಭಾಗಿಯಾಗುವ ವಿದೇಶಿ ಪ್ರಜೆಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ. ಭಾಗಿಯಾಗುವ ಆರೋಪಿಗಳನ್ನು ವಿದೇಶಿ ಪ್ರಜೆಗಳ ಕಾಯ್ದೆ ಅಡಿಯಲ್ಲಿ ಗಡಿಪಾರು ಪ್ರಕ್ರಿಯೆ ಕೈಗೊಳ್ಳಲು ಕ್ರಮ ಜರುಗಿಸಲಾಗುತ್ತಿದೆ.
- PITNDPS-1988ರ ಕಾಯ್ದೆರನ್ವಯ ರಾಜ್ಯದಲ್ಲಿ ಇದುವರೆವಿಗೂ 19 ಆರೋಪಿಗಳ ವಿರುದ್ಧ ನಿಯಾಮಾನುಸಾರ ಬಂಧನ ಕ್ರಮ ಜರುಗಿಸಿ ಮಾನ್ಯ PITNDPS ಸಲಹಾ ಮಂಡಳಿಯ ಮುಂದೆ ಬಂಧಿತ ಆರೋಪಿಯನ್ನು ಹಾಜರುಪಡಿಸಿ, ಮಾನ್ಯ ಸಲಹಾ ಮಂಡಳಿಯ ವರದಿಯನ್ವಯ ಕ್ರಮ ಕೈಗೊಳ್ಳಲಾಗುತ್ತಿದೆ.
- ಜೂನ್ 26, 2025 ರಂದು "ಡ್ರಗ್ಸ್ ದುರುಪಯೋಗ ಮತ್ತು ಅಕ್ರಮ ಸಾಗಣಿಕೆ ವಿರುದ್ಧ ಅಂತರ ರಾಷ್ಟ್ರೀಯ ದಿನಾಚರಣೆ" ಅಂಗವಾಗಿ ಸುಮಾರು 4000 ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ತರಬೇತಿ ಕಾರ್ಯಾಗಾರ ಆಯೋಜಿಸಿ ತಿಳುವಳಿಕೆ ನೀಡಲಾಗಿದೆ.
- Drugs Free Karnataka Mobile App ಅನ್ನು ಅಭಿವೃದ್ಧಿಪಡಿಸಿ ಸಾರ್ವಜನಿಕರಲ್ಲಿ ಹಾಗೂ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಿ, ಮಾದಕವಸ್ತು ಬಳಕೆ, ಸಂಗ್ರಹಣೆ ಸರಬರಾಜು ಮೇಲೆ ನಿಯಂತ್ರಣ ಸಾಧಿಸುವ ನಿಟ್ಟಿನಲ್ಲಿ ದಿಟ್ಟ ಕ್ರಮಕೈಗೊಳ್ಳಲಾಗುತ್ತಿದೆ. ಸದರಿ App ಮುಖಾಂತರ ಸಾರ್ವಜನಿಕರು ನೇರವಾಗಿ ಪೊಲೀಸರಿಗೆ ಮಾಹಿತಿ

| | |
|---|---|
| | ನೀಡಬಹುದಾಗಿರುತ್ತದೆ. |
| (ಆ)ಡ್ರಗ್ಸ್ ದಂಧೆಯನ್ನು ಸಂಪೂರ್ಣ ಮಟ್ಟ ಹಾಕಲು ಮತ್ತು ಪೆಡ್ಲರ್‌ಗಳ ಆಸ್ತಿಯನ್ನು ಮುಟುಗೋಲು ಹಾಕಿಕೊಳ್ಳಲು ಕ್ರಮ ಕೈಗೊಳ್ಳಲಾಗಿದೆಯೇ; | ಡ್ರಗ್ಸ್ ದಂಧೆಯನ್ನು ಸಂಪೂರ್ಣ ಮಟ್ಟ ಹಾಕಲು ಮತ್ತು ಪೆಡ್ಲರ್‌ಗಳ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಳ್ಳಲು NDPS ಕಾಯ್ದೆ-1985ರ Chapter-V, PITNDPS ಕಾಯ್ದೆ-1988 ರ ನಿಯಮ ಗಳಡಿಯಲ್ಲಿ ಕಾನೂನು ಕ್ರಮ ಜರುಗಿಸಲಾಗುತ್ತಿದೆ. |
| ಇ) ಶಾಲಾ ಕಾಲೇಜುಗಳಲ್ಲಿ ನಡೆಯುವ ಡ್ರಗ್ಸ್ ದಂಧೆ ವಿರುದ್ಧವಾಗಿ ಡ್ರಗ್ಸ್ ನಿರೋಧಕ ಸಮಿತಿಗಳನ್ನು ರಚಿಸಲು ಸರ್ಕಾರ ಮುಂದಾಗಿದೆಯೇ? (ಮಾಹಿತಿ ನೀಡುವುದು) | ರಾಜ್ಯದ ಎಲ್ಲಾ ಪದವಿ ಪೂರ್ವ ಮತ್ತು ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ವಸತಿ ನಿಲಯಗಳು ಸೇರಿದಂತೆ ಮಾದಕ ವಸ್ತು ವಿರೋಧಿ ಸಮಿತಿಗಳ ರಚನೆ ಕುರಿತು ಕ್ರಮ ಕೈಗೊಳ್ಳಲಾಗುತ್ತಿದೆ. |

ಒಇ 40 ಪಿಎನ್‌ಡಿ 2025 (ಇ)

(ಡಾ: ಜಿ . ಪರಮೇಶ್ವರ್)
ಗೃಹ ಸಚಿವರು